## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರರವರಿಗೆ Capacity Building ರಡಿ ಅನುದಾನ ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 433 ಟಿಎನ್‌ಆರ್ 2022. ದಿನಾಂಕ: 02.12.2022.
2. ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ರವರ ಪತ್ರ ಸಂಖ್ಯೆ: KSNDMC/RDG/339/2012-13/188, ದಿನಾಂಕ: 08.07.2024.

* * * * *

**ಪ್ರಸ್ತಾವನೆ:**

2022-23ನೇ ಸಾಲಿನಲ್ಲಿ ಕಂದಾಯ ಇಲಾಖೆಯ ವಿಪತ್ತು ನಿರ್ವಹಣೆಗೆ ಸಂಬಂದಿಸಿದಂತೆ ಜರುಗುವ ಸಭೆ, ವಿವಿಧ ತರಬೇತಿ ಕಾರ್ಯಗಾರ, ಪ್ರಕೃತಿ ವಿಕೋಪ ಸಂಬಂಧ ಕೇಂದ್ರ ಸರ್ಕಾರದಿಂದ ಹೆಚ್ಚುವರಿ ಆರ್ಥಿಕ ನೆರವು ಕೋರುತ್ತಾ ಮೆಮೋರೆಂಡಮ್ ಮುದ್ರಣ ವೆಚ್ಚ, ಕೇಂದ್ರ ಅಧ್ಯಯನ ತಂಡದ ಪರಿವೀಕ್ಷಣೆಯ ವೆಚ್ಚ ಇತ್ಯಾದಿಗಳಿಗೆ ಮತ್ತು ರಾಜ್ಯ ತುರ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ / ಹೊರಗುತ್ತಿಗೆ ಸಿಬ್ಬಂದಿಗಳ ಸಂಭಾವನೆಗಾಗಿ ಮೇಲೆ (1) ರಲ್ಲಿ ಓದಲಾದ ದಿನಾಂಕ: 02.12.2022 ರ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿದ್ದ ರೂ. 87.20 ಲಕ್ಷಗಳ ಜೊತೆಗೆ ಹೆಚ್ಚುವರಿಯಾಗಿ ರೂ.36,682/- ಗಳನ್ನು ಜೂನ್ 2024 ರವರೆಗೆ ಖರ್ಚು ಮಾಡಲಾಗಿರುತ್ತದೆ. ಆದ್ದರಿಂದ ವಿವಿಧ ವೆಚ್ಚಗಳಿಗಾಗಿ ಕೆಳಕಂಡಂತೆ ಅನುದಾನವನ್ನು ಬಿಡುಗಡೆಗೊಳಿಸುವಂತೆ ಮೇಲೆ (2) ರಲ್ಲಿ ಓದಲಾದ ದಿನಾಂಕ: 08.07.2024 ರ ಪತ್ರದಲ್ಲಿ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕರು ಕೋರಿರುತ್ತಾರೆ.

**(ರೂ. ಲಕ್ಷಗಳಲ್ಲಿ)**

| ಕ್ರ.ಸಂ. | ವಿವರ | ಬಿಡುಗಡೆ ಮಾಡಲು ಕೋರಿ ಮೊತ್ತ |
|---|---|---|
| 1 | ಕಂದಾಯ ಇಲಾಖೆಯ ತುರ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ / ಹೊರಗುತ್ತಿಗೆ ಸಿಬ್ಬಂದಿಗಳ 6/2024 ರಿಂದ 3/2025 ರವರಗೆ ಸಂಭಾವನೆ ಪಾವತಿಸಲು. | 30.00 |

.....2

| | | |
|---|---|---|
| 2 | ಕಂದಾಯ ಇಲಾಖೆಯ ವಿಪತ್ತು ನಿರ್ವಹಣೆ ಸಂಬಂಧ ಜರಗುವ ಸಭೆ, ತರಬೇತಿ, ಕಾರ್ಯಾಗಾರ ಇತ್ಯಾದಿಗಳಿಗೆ. | 11.00 |
| 3 | ಪ್ರಕೃತಿ ವಿಕೋಪ ಸಂಬಂಧ ಕೇಂದ್ರ ಸರ್ಕಾರದ ವೀಕ್ಷಣ ತಂಡಕ್ಕೆ ಸಲ್ಲಿಸುವ ಮೆಮೋರೆಂಡಮ್ ಮುದ್ರಣ ವೆಚ್ಚ ಹಾಗೂ ಇತರೆ ವೆಚ್ಚ ಸೇರಿ. | 17.00 |
| 4 | ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಕೃತಿ ವಿಕೋಪ ಸಂಬಂಧ IMCT (ವಿಕ್ಷಣಾ ತಂಡದ) ಮತ್ತು ಸಿಬ್ಬಂದಿಗಳ ಪ್ರಯಾಣ ಹಾಗೂ ಇತರೆ ವೆಚ್ಚಕ್ಕಾಗಿ. | 7.00 |
| **ಒಟ್ಟು** | | **65.00** |

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕಂದಾಯ ಇಲಾಖೆಯ ತುರ್ತು ನಿರ್ವಹಣಾ ಕೇಂದ್ರದಲ್ಲಿ (S.E.O.C.) ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ / ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನವನ್ನು ಪಾವತಿಸಲು ಪ್ರಸತ್ತ ರೂ.30.00 ಲಕ್ಷಗಳನ್ನು (ಮೂವತ್ತು ಲಕ್ಷ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಲು ಸರ್ಕಾರವು ತಿರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 383 ಟಿಎನ್‌ಆರ್ 2024,**
**ಬೆಂಗಳೂರು, ದಿನಾಂಕ: 24.10.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕಂದಾಯ ಇಲಾಖೆಯ ತುರ್ತು ನಿರ್ವಹಣಾ ಕೇಂದ್ರದಲ್ಲಿ (S.E.O.C.) ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ / ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನವನ್ನು ಪಾವತಿಸಲು ರೂ.30.00 ಲಕ್ಷಗಳನ್ನು (ಮೂವತ್ತು ಲಕ್ಷ ರೂಪಾಯಿಗಳು ಮಾತ್ರ) ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆ: 2245-80-102-0-01-051 (Capacity Building) ರಡಿ ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:-**

1. ಈ ಅನುದಾನವನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರು ಪೇಯಿಸ್ ರಸೀದಿ ಬಿಲ್ಲಿನಲ್ಲಿ ಲೆಕ್ಕ ಶೀರ್ಷಿಕೆ "2245-80-102-0-01-051" ರಡಿಯಲ್ಲಿ ಡ್ರಾ ಮಾಡಿ ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು ಇವರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಅಟ್ಟೂರು ಲೇಔಟ್, ಯಲಹಂಕ, ಬೆಂಗಳೂರು-560 064, ಬ್ಯಾಂಕ್ ಖಾತೆ ಸಂಖ್ಯೆ: 32062053861, IFSC Code: SBIN0013282 ಗೆ ಜಮಾ ಮಾಡುವುದು.

2. ಈ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಹಡೆ ಮಾಡಲಾಗಿದ್ದೆಯೋ ಅದೆ ಉದ್ದೆಶಕ್ಕೆ ಬಳಸತಕ್ಕದ್ದು, ಹಾಗೂ ಬೇರೆ ಉದ್ದೇಶಗಳಿಗೆ ಸರ್ಕಾರದ ಪೂರ್ವಾನುಮತಿ ಇಲ್ಲದೇ ಬಳಸತಕ್ಕದ್ದಲ್ಲ.
3. ಸದರಿ ಅನುದಾನದ ವೆಚ್ಚಕ್ಕೆ ಸಂಬಂದಿಸಿದಂತೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Mukhtar Pasha. H-G
24/10/2024

**(ಮುಕ್ತಾರ್ ಪಾಷ. ಹೆಚ್.ಜಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A & E), ಕರ್ನಾಟಕ, ಪಿ.ಬಿ.ನಂ. 5329/5369, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
2. ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು.
3. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
4. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ. ಅರಮನೆ ರಸ್ತೆ, ಬೆಂಗಳೂರು.
5. ಲೆಕ್ಕಪತ್ರ ಶಾಖೆ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ ಹಾಗೂ ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ನೋಂದಣಿ & ಮುದ್ರಾಂಕ) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.